# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ

## ಎಂ.ವಿ.ಸಿ.ನಂ. 172/2022

ಪಿ ಡಬ್ಲ್ಯೂಃ 1

ದಿನಾಂಕ 20-05-2025 ರಂದು ಸಾಕ್ಷಿಗೆ ಪ್ರಮಾಣ ವಚನಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರಃ ಶ್ರೀ ಹೆಚ್ ಟಿ ವಕೀಲರಿಂದಃ

ನಾನು ಈ ಅರ್ಜಿಯಲ್ಲಿ ಅರ್ಜಿದಾರ ಇರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ. ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ, ಅವುಗಳನ್ನು ಗುರುತಿಸಬೇಕಾಗಿ ಕೋರಿಕೊಳ್ಳುತ್ತೇನೆ.

ಪೋಲೀಸ್ ನೋಟೀಸಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಪೋಲೀಸರಿಗೆ ಕೊಟ್ಟ ದೂರಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಸ್ಥಳ ಪಂಚನಾಮೆಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಗಾಯದ ಪ್ರಮಾಣ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಐಎಂವಿ ವರದಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.